ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ತೋಟಗಾರಿಕೆ ಬೆಳೆಗಳ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

209 (173) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ, ಚನ್ನಗಿರಿ ತಾಲ್ಲೂಕಿನಲ್ಲಿ ಎಷ್ಟು ಹೆಕ್ಟೇರ್ ತೋಟಗಾರಿಕೆ ಪ್ರದೇಶ ಇದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತೋಟಗಾರಿಕೆ ಬೆಳೆಗಳಿಂದ ರೈತರಿಗೆ ಅನುಕೂಲವಾಗುವಂತಹ ಬೆಳೆಗಳಿಗೆ ಸರ್ಕಾರ ಬೆಂಬಲ ಬೆಲೆ ನಿಗಧಿಪಡಿಸಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ತೋಟಗಾರಿಕೆ ಬೆಳೆಗಳನ್ನು ಬೇಡಿಕೆ / ಪೂರೈಕೆಗೆ ತಕ್ಕಂತೆ ರಫ್ತು ಹಾಗೂ ಆಮದು ಮಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕರ್ನಾಟಕ ರಾಜ್ಯದಲ್ಲಿ ತೋಟಗಾರಿಕೆ ಬೆಳೆಗಳಿಗೆ ಸರ್ಕಾರ ನೀಡುತ್ತಿರುವ ಸವಲತ್ತುಗಳು ಯಾವುವು ?